# ಬೇಕರಿ ಕೋರ್ಸ್‌ಗೆ ಅರ್ಜಿ ಆಹ್ವಾನ

**ಬೆಂಗಳೂರು:** ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯದ ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆಯು 14 ವಾರಗಳ ಬೇಕರಿ ಟೆಕ್ನಾಲಜಿ ಸರ್ಟಿಫಿಕೇಟ್ ಕೋರ್ಸ್‌ಗೆ ಅರ್ಜಿ ಆಹ್ವಾನಿಸಿದೆ. ಎಸ್‌ಎಸ್‌ಎಲ್‌ಸಿ ಉತ್ತೀರ್ಣ/ಅನುತ್ತೀರ್ಣ ಆಗಿರುವವರು 10 ರೂ. ಸಂದಾಯ ಮಾಡಿ ಅರ್ಜಿ ನಮೂನೆ ಪಡೆದು, ಜು.5ರ ಸಂಜೆ 4 ಗಂಟೆಯೊಳಗೆ ಸಂಯೋಜಕರು ಮತ್ತು ಮುಖ್ಯಸ್ಥರು, ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆ, ಕೃಷಿ ವಿಶ್ವವಿದ್ಯಾಲಯ, ಜಿಕೆವಿಕೆ, ಬೆಂಗಳೂರು-65 ವಿಳಾಸಕ್ಕೆ ತಲುಪಿಸಬೇಕು. ಹೆಚ್ಚಿನ ಮಾಹಿತಿಗಾಗಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080 2351 3370 ಸಂಪರ್ಕಿಸಬಹುದು.

» ಎಸ್ಸೆಸ್ಸೆಲ್ಸಿ ಉತ್ತೀರ್ಣ/ ಅನುತ್ತೀರ್ಣ ಆದವರಿಗೆ ಅವಕಾಶ

05-07-2024
Vijayavani
Pg 08

---

ವಿಶ್ವವಾರಿಧಿ
05 Jul 2024

# ಆನ್‌ಲೈನ್ ಮೂಲಕ ಬೀಜ ಖರೀದಿ ವ್ಯವಸ್ಥೆ

ವಿಶ್ವ ವಾರಿಧಿ । ಬೆಂಗಳೂರು

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಅಖಿಲ ಭಾರತ ಸುಸಂಘಿತ ಪ್ರಾಯೋಜನೆ (ಬೀಜ ಬೆಳೆಗಳು) ವತಿಯಿಂದ ಇದೇ ಪ್ರಥಮ ಬಾರಿಗೆ ಆನ್‌ಲೈನ್ ಮೂಲಕ ಬೀಜ ಮಾರಾಟ ಜಾಲತಾಣವನ್ನು ಅಭಿವೃದ್ಧಿಪಡಿಸಿದೆ.ಬೀಜಜಾಲತಾಣದಲ್ಲಿ www.uasgkvkseeds.org ರೈತ ಬಾಂಧವರು ನೊಂದಣಿ ಮಾಡಿಕೊಂಡು ನೇರವಾಗಿ ಬಿತ್ತನೆ ಬೀಜಗಳನ್ನು ಖರೀದಿಸಬಹುದಾಗಿದೆ.

ನೊಂದಣಿ ಮಾಡುವಾಗ ಪೂರ್ಣವಿಳಾಸ, ಸರಿಯಾದ ಪಿನ್ ಕೋಡ್‌ಅನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಬಿತ್ತನೆ ಬೀಜದ ಮೊತ್ತವನ್ನು ಆನ್‌ಲೈನ್ ಗೂಗಲ್ ಪೇ, ಫೋನ್ ಪೇ ಇತ್ಯಾದಿ ಮೂಲಕ ಪಾವತಿಸುವುದು.

ಬಿತ್ತನೆ ಬೀಜಗಳನ್ನು ಅಂಚೆ ಇಲಾಖೆ ಮೂಲಕ ರೈತರ ಮನೆ ಬಾಗಿಲಿಗೆ ಸರಬರಾಜು ಮಾಡಲಾಗುವುದು.

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ ವ್ಯಾಪ್ತಿಗೆ ಬರುವ 10 ಜಿಲ್ಲೆಗಳಿಗೆ ಸೂಕ್ತವಾದ ವಿವಿಧ ಬೆಳೆಗಳಾದ ರಾಗಿ, ಭತ್ತ, ತೊಗರಿ, ಅವರೆ, ಸಿರಿಧಾನ್ಯಗಳು ತಳಿಗಳ ನಿಜಬೀಜ ಹಾಗೂ ಪ್ರಮಾಣಿತ ಬಿತ್ತನೆ ಬೀಜ ಮತ್ತು ಎಣ್ಣೆಕಾಳು ಬೆಳೆಗಳಾದ ಸಂಕರಣ ಸೂರ್ಯಕಾಂತಿ ಬಿತ್ತನೆ ಬೀಜ ಲಭ್ಯವಿರುತ್ತದೆ. ಆಸಕ್ತ ರೈತರು ಬಿತ್ತನೆ ಬೀಜವನ್ನು ರಾಷ್ಟ್ರೀಯ ಬೀಜ ಪ್ರಾಯೋಜನೆ (ಎನ್.ಎಸ್.ಪಿ), ಕೃಷಿ ತಂತ್ರಜ್ಞಾನ ಮಾಹಿತಿಕೇಂದ್ರ (ಎ.ಟಿ.ಐ.ಸಿ), ಜಿ.ಕೆ.ವಿ.ಕೆ, ಮತ್ತು ಕೃಷಿ ವಿಜ್ಞಾನ ಕೇಂದ್ರಗಳಾದ ಚಾಮರಾಜನಗರ, ಕಂದಲಿ, ಹಾಸನ, ಚಿಂತಾಮಣಿ ಮತ್ತು ವಲಯ ಕೃಷಿ ಸಂಶೋಧನಾಕೇಂದ್ರ, ವಿ.ಸಿ.ಫಾರಂ, ಮಂಡ್ಯ ಹಾಗೂ ರಾಗಿ ಬ್ರಹ್ಮ ಲಕ್ಷ್ಮಣಯ್ಯ ನವರರೈತ ಸಲಹಾ ಕೇಂದ್ರ ಎ.ಪಿ.ಎಂ.ಸಿ.ಯಾರ್ಡ್, ಮಂಡ್ಯ ಕೇಂದ್ರಗಳಿಂದ ಖರೀದಿಸಬಹುದಾಗಿದೆ ಎಂದು ತಿಳಿಸಿದೆ.

---

05-07-2024
Udayavani
Pg 03

# ಜಿಕೆವಿಕೆಯಿಂದ ಆನ್‌ಲೈನ್‌ನಲ್ಲಿ ಬೀಜ ಮಾರಾಟ ಆರಂಭ

■ ಉದಯವಾಣಿ ಸಮಾಚಾರ

**ಬೆಂಗಳೂರು:** ಜಿಕೆವಿಕೆಯಿಂದ ಇದೇ ಮೊದಲ ಬಾರಿಗೆ ಆನ್‌ಲೈನ್ ಮೂಲಕ ಬೀಜ ಮಾರಾಟ ಮಾಡಲಾಗುತ್ತಿದೆ. ಬೆಂಗಳೂರು ವ್ಯಾಪ್ತಿಯ 10 ಜಿಲ್ಲೆಗಳಿಗೆ ಸೂಕ್ತ ಬೆಳೆ ತಳಿಗಳ ಗುಣಮಟ್ಟದ ಮತ್ತು ಪ್ರಮಾಣಿಕೃತ ಬೀಜಗಳು ಲಭ್ಯವಿರಲಿದೆ. ಜಿಕೆವಿಕೆ ಬೀಜ ಮಾರಾಟ ಜಾಲತಾಣವನ್ನು ಅಭಿವೃದ್ಧಿಪಡಿಸಿದ್ದು, www.uasgkvkseeds.org ನಲ್ಲಿ ರೈತರು ನೋಂದಣಿ ಮಾಡಿಕೊಂಡು, ನೇರವಾಗಿ ಬಿತ್ತನೆ ಬೀಜಗಳನ್ನು ಖರೀದಿಸಬಹುದಾಗಿದೆ. ನೋಂದಣಿ ಮಾಡುವಾಗ ಪೂರ್ಣ ವಿಳಾಸ ಹಾಗೂ ಅಂಚೆ ಕಚೇರಿಯ ಪಿನ್‌ಕೋಡ್ ಕಡ್ಡಾಯವಾಗಿ ನೋಂದಾಯಿಸಬೇಕು. ಬೀಜದ ಮೊತ್ತವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಬಹುದಾಗಿದೆ.

■ ಬೆಂಗಳೂರು ವ್ಯಾಪ್ತಿಯ 10 ಜಿಲ್ಲೆಗಳ ಸೂಕ್ತ ಬೆಳೆಗೆ ತಕ್ಕ ತಳಿಗಳ ಬೀಜ ಮಾರಾಟ

---

ಉದಯಕಾಲ
Jul 5, 2024

# ಬೆಂಗಳೂರಿನ ಕೃಷಿ ವಿವಿಯಲ್ಲಿ ಆನ್ ಲೈನ್ ಮೂಲಕ ಬೀಜ ಖರೀದಿ ವ್ಯವಸ್ಥೆ

ಉದಯಕಾಲ ನ್ಯೂಸ್

**ಬೆಂಗಳೂರು:** ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಅಖಿಲ ಭಾರತ ಸುಸಂಘಿತ ಪ್ರಾಯೋಜನೆ (ಬೀಜ ಬೆಳೆಗಳು) ವತಿಯಿಂದ ಇದೇ ಮೊದಲ ಬಾರಿಗೆ ಆನ್ ಲೈನ್ ಮೂಲಕ ಬೀಜ ಮಾರಾಟ ಜಾಲತಾಣವನ್ನು ಅಭಿವೃದ್ಧಿಪಡಿಸಿದ್ದು, ರೈತರು www.uasgkvkseeds.org ನಲ್ಲಿ ನೋಂದಣಿ ಮಾಡಿಕೊಳ್ಳುವ ಮೂಲಕ ನೇರವಾಗಿ ಬಿತ್ತನೆ ಬೀಜಗಳನ್ನು ಖರೀದಿಸಬಹುದಾಗಿದೆ. ನೋಂದಣಿ ಮಾಡುವಾಗ ಪೂರ್ಣವಿಳಾಸ, ಸರಿಯಾದ ಪಿನ್‌ಕೋಡ್‌ಅನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಬಿತ್ತನೆ ಬೀಜದ ಮೊತ್ತವನ್ನು ಆನ್ಲೈನ್ ಗೂಗಲ್ ಪೇ, ಪೋನ್ ಪೇ ಇತ್ಯಾದಿ ಮೂಲಕ ಪಾವತಿಸುವುದು. ನೊಂದಾಯಿತ ರೈತರಿಗೆ ಬಿತ್ತನೆ ಬೀಜಗಳನ್ನು ಅಂಚೆ ಇಲಾಖೆ ಮೂಲಕ ರೈತರ ಮನೆ ಬಾಗಿಲಿಗೆ ಸರಬರಾಜು ಮಾಡಲಾಗುವುದು. ಆಸಕ್ತ ರೈತರು ಬಿತ್ತನೆ ಬೀಜವನ್ನು ರಾಷ್ಟ್ರೀಯ ಬೀಜ ಪ್ರಾಯೋಜನೆ (ಎನ್.ಎಸ್.ಪಿ), ಕೃಷಿ ತಂತ್ರಜ್ಞಾನ ಮಾಹಿತಿಕೇಂದ್ರ (ಎ.ಟಿ.ಐ.ಸಿ), ಜಿ.ಕೆ.ವಿ.ಕೆ ಮತ್ತು ಕೃಷಿ ವಿಜ್ಞಾನ ಕೇಂದ್ರಗಳಾದ ಚಾಮರಾಜನಗರ, ಕಂದಲಿ, ಹಾಸನ, ಚಿಂತಾಮಣಿ ಮತ್ತು ವಲಯ ಕೃಷಿ ಸಂಶೋಧನಾಕೇಂದ್ರ, ವಿ.ಸಿ.ಫಾರಂ, ಮಂಡ್ಯ ಹಾಗೂ ರಾಗಿ ಬ್ರಹ್ಮಲಕ್ಷ್ಮಣಯ್ಯ ನವರರೈತ ಸಲಹಾ ಕೇಂದ್ರ, ಎ.ಪಿ.ಎಂ.ಸಿ.ಯಾರ್ಡ್, ಮಂಡ್ಯ ಕೇಂದ್ರಗಳಿಂದ ಖರೀದಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

---

ವಾರ್ತಾ ಭಾರತಿ
Jul 5, 2024

# ಬೆಂಗಳೂರು ಕೃಷಿ ವಿವಿ: ಆನ್‌ಲೈನ್ ಮೂಲಕ ಬೀಜ ಖರೀದಿ ವ್ಯವಸ್ಥೆ

ಬೆಂಗಳೂರು, ಜು.4: ಬೆಂಗಳೂರುಕೃಷಿವಿಶ್ವವಿದ್ಯಾನಿಲಯ, ಅಖಿಲ ಭಾರತ ಸುಸಂಘಿತ ಪ್ರಾಯೋಜನೆ (ಬೀಜಬೆಳೆಗಳು) ವತಿಯಿಂದ ಇದೇ ಪ್ರಥಮ ಬಾರಿಗೆ ಆನ್‌ಲೈನ್ ಮೂಲಕ ಬೀಜ ಮಾರಾಟ ಜಾಲತಾಣವನ್ನು ಅಭಿವೃದ್ಧಿಪಡಿಸಿದೆ.

ಬೀಜ ಜಾಲತಾಣದಲ್ಲಿ www.uasgkvkseeds.org ರೈತ ಬಾಂಧವರು ನೋಂದಣಿ ಮಾಡಿಕೊಂಡು ನೇರವಾಗಿ ಬಿತ್ತನೆ ಬೀಜಗಳನ್ನು ಖರೀದಿಸಬಹುದಾಗಿದೆ. ನೋಂದಣಿ ಮಾಡುವಾಗ ಪೂರ್ಣವಿಳಾಸ, ಸರಿಯಾದ ಪಿನ್ ಕೋಡ್‌ಅನ್ನು ಕಡ್ಡಾಯವಾಗಿ ನಮೂದಿಸಬೇಕು. ಬಿತ್ತನೆ ಬೀಜದ ಮೊತ್ತವನ್ನು ಆನ್‌ಲೈನ್ ಗೂಗಲ್ ಪೇ, ಫೋನ್ ಪೇ ಇತ್ಯಾದಿ ಮೂಲಕ ಪಾವತಿಸಬೇಕು.

ಬಿತ್ತನೆ ಬೀಜಗಳನ್ನು ಅಂಚೆ ಇಲಾಖೆ ಮೂಲಕ ರೈತರ ಮನೆ ಬಾಗಿಲಿಗೆ ಸರಬರಾಜು ಮಾಡಲಾಗುವುದು. ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ ವ್ಯಾಪ್ತಿಗೆ ಬರುವ 10 ಜಿಲ್ಲೆಗಳಿಗೆ ಸೂಕ್ತವಾದ ವಿವಿಧ ಬೆಳೆಗಳಾದ ರಾಗಿ, ಭತ್ತ, ತೊಗರಿ, ಅವರೆ, ಸಿರಿಧಾನ್ಯಗಳು ತಳಿಗಳ ಬೀಜ, ಪ್ರಮಾಣಿತ ಬಿತ್ತನೆ ಬೀಜ ಮತ್ತು ಎಣ್ಣೆಕಾಳು ಬೆಳೆಗಳಾದ ಸಂಕರಣ ಸೂರ್ಯಕಾಂತಿ ಬಿತ್ತನೆ ಬೀಜ ಲಭ್ಯವಿರುತ್ತದೆ.

ಆಸಕ್ತ ರೈತರು ಬಿತ್ತನೆ ಬೀಜವನ್ನು ರಾಷ್ಟ್ರೀಯ ಬೀಜ ಪ್ರಾಯೋಜನೆ (ಎನ್‌ಎಸ್‌ಪಿ), ಕೃಷಿ ತಂತ್ರಜ್ಞಾನ ಮಾಹಿತಿಕೇಂದ್ರ (ಎಟಿಐಸಿ), ಜಿ.ಕೆ.ವಿ.ಕೆ, ಮತ್ತು ಕೃಷಿ ವಿಜ್ಞಾನ ಕೇಂದ್ರ ಚಾಮರಾಜನಗರ, ಕಂದಲಿ, ಹಾಸನ, ಚಿಂತಾಮಣಿ, ವಲಯ ಕೃಷಿ ಸಂಶೋಧನಾ ಕೇಂದ್ರ, ವಿ.ಸಿ.ಫಾರಂ, ಮಂಡ್ಯ, ಸಲಹಾ ಕೇಂದ್ರ ಎ.ಪಿ.ಎಂ.ಸಿ.ಯಾರ್ಡ್, ಮಂಡ್ಯಕೇಂದ್ರಗಳಿಂದ ಖರೀದಿಸಬಹುದಾಗಿದೆ ಎಂದು ಪ್ರಕಟನೆ ತಿಳಿಸಿದೆ.

